1310 (1445) ಶ್ರೀ ಅಂಜನಾಮೂರ್ತಿ (ನೆಲಮಂಗಲ) :– ಮಾನ್ಯ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006–07ನೇ ಸಾಲಿನ ಆಯವ್ಯಯದಲ್ಲಿ ತಿಳಿಸಿರುವಂತೆ ಕೈಮಗ್ಗವನ್ನು ಅವಲಂಬಿಸಿರುವ ನೇಕಾರರು ಆಶ್ರಯ ಯೋಜನೆಯಡಿಯಲ್ಲಿ ಮನೆ ಕಟ್ಟಿಕೊಳ್ಳುವಾಗ ಶೆಡ್ ಸಹಿತ ಮನೆ ಕಟ್ಟಿಕೊಳ್ಳಲು ಎಷ್ಟು ಹಣ ನಿಗದಿ ಮಾಡಲಾಗಿದೆ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಎಷ್ಟು ಫಲಾನುಭವಿಗಳಿಗೆ ಈ ಯೋಜನೆಯಡಿ ಹಣ ಬಿಡುಗಡೆ ಮಾಡಲಾಗಿದೆ;

ಇ) ಈ ಯೋಜನೆಯಡಿ ಯಾವ ಯಾವ ಜಿಲ್ಲಾ, ತಾಲ್ಲುಕುಗಳಲ್ಲಿ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಜವಳಿ ಸಚಿವರು) :

ಅ) 2006–07ನೇ ಸಾಲಿನ ಆಯವ್ಯಯದಲ್ಲಿ ಕೈಮಗ್ಗ ನೇಕಾರರು ಆಶ್ರಯ ಯೋಜನೆಯಡಿ ಮನೆ ಕಟ್ಟಿಕೊಳ್ಳುವಾಗ ಶೆಡ್ ಸಹಿತ ಮನೆ ಕಟ್ಟಿಕೊಳ್ಳಲು ರೂ.25,000/– ಗಳ ನಿರ್ಮಾಣ ವೆಚ್ಚದ ಜೊತೆಗೆ ಶೆಡ್ ನಿರ್ಮಾಣಕ್ಕೆ ರೂ.5,000/– ಗಳನ್ನು ಹೆಚ್ಚುವರಿಯಾಗಿ ಸೇರಿಸಿ ಒಟ್ಟು ರೂ.30,000/– ಗಳನ್ನು ನಿಗದಿಪಡಿಸಲಾಗಿದ್ದು, ಇದಕ್ಕಾಗಿ ಆಶ್ರಯ ಯೋಜನೆಗೆ ಹೆಚ್ಚುವರಿಯಾಗಿ ರೂ.5.00 ಕೋಟಿಗಳನ್ನು ಹಂಚಿಕೆ ಮಾಡಲಾಗಿದೆ.

ಆ,ಇ) ಈವರೆಗೆ 1513 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.

2006–07ನೇ ಸಾಲಿನಲ್ಲಿ ಬಾಗಲಕೋಟೆ ಜಿಲ್ಲೆಯ ಹುನಗುಂದ, ಬಾದಾಮಿ, ಮುಧೋಳ ತಾಲ್ಲೂಕುಗಳು, ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕು, ಗದಗ್ ಜಿಲ್ಲೆಯ ರೋಣ, ನರಗುಂದ ತಾಲ್ಲೂಕು ಮತ್ತು ಧಾರವಾಡ ಜಿಲ್ಲೆಯ

ಹುಬ್ಬಳ್ಳಿ, ಕುಂದಗೋಳ, ಧಾರವಾಡ ತಾಲ್ಲೂಕುಗಳಲ್ಲಿ ಯೋಜನೆಯನ್ನು ಕೈಮಗ್ಗ ನೇಕಾರರಿಗೆ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ.

1311 (1446) ಶ್ರೀ ಅಂಜನಾಮೂರ್ತಿ (ನೆಲಮಂಗಲ) :– ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006–07ನೇ ಸಾಲಿನ ಆಯವ್ಯಯದಲ್ಲಿ ಡಾ: ನಂಜುಂಡಪ್ಪ ವರದಿಯಲ್ಲಿ ಸೂಚಿಸಿರುವ ಎಷ್ಟು ಕೈಗಾರಿಕಾ ಸಮುಚ್ಚಯಗಳನ್ನು ಸ್ಥಾಪನೆ ಮಾಡಲಾಗಿದೆ;

ಆ) ಮಾಡಿದ್ದಲ್ಲಿ ಇದಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;

ಇ) ಹಾಗಿದ್ದಲ್ಲಿ ಯಾವ ಜಿಲ್ಲೆಯಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ?

ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) ಕೈಗಾರಿಕಾ ವಿಕಾಸ ಯೋಜನೆಯಡಿ ಮತ್ತು ಇತರೆ ಯೋಜನೆಯಡಿ ಒಟ್ಟು 22 ತಾಲ್ಲುಕುಗಳಲ್ಲಿ ಕೈಗಾರಿಕಾ ಸಮುಚ್ಚಯಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಇದರಲ್ಲಿ ಈಗಾಗಲೇ 3 ಕೈಗಾರಿಕಾ ಸಮುಚ್ಚಯಗಳ ಕಾಮಗಾರಿಗಳು ಪೂರ್ಣಗೊಂಡಿದೆ. ಉಳಿದವುಗಳಿಗೆ ಪ್ರಸಕ್ತ ಸಾಲಿನಲ್ಲಿ ಹಣವನ್ನು ಬಿಡುಗಡೆ ಮಾಡಿದ್ದು, ನಿರ್ಮಾಣ ಕಾರ್ಯಗಳು ಪ್ರಾರಂಭವಾಗಲಿವೆ.

ಆ) ವಿವರಗಳು ಅನುಬಂಧದಲ್ಲಿ ಒದಗಿಸಿದೆ.

ಇ) ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.

ವಿಧಾನಸಭೆ ಪ್ರಶ್ನೆ ಸಂಖ್ಯೆ : 1446 ಕ್ಕೆ ಅನುಬಂಧ

2006–07ನೇ ಸಾಲಿನ ಆಯವ್ಯಯದಲ್ಲಿ ಸೂಚಿಸಿದ್ದಂತೆ, ಕೈಗಾರಿಕಾ ಸಮುಚ್ಚಯಗಳ ಸ್ಥಾಪನೆ ಮಾಡಲು ಪರಿಗಣಿಸಲಾದ ವಿವರಗಳು.